**ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು** 314-2021

**ಸಿ.ಡಬ್ಲ್ಯು** -4, **ಪಿ.ಡಬ್ಲ್ಯು** -6

**ಸಾಕ್ಷಿದಾರರ ಹೆಸರು** : ನವೀನ್ ಬಿ.ಎಸ್.
ತಂದೆಯ **ಹೆಸರು** : ಶ್ರೀಧರಶೆಟ್ಟಿ
**ವಯಸ್ಸು** : 30 ವರ್ಷ
**ಉದ್ಯೋಗ** : ವ್ಯವಸಾಯ
**ವಾಸ** : ವರದಮೂಲ, ಸಾಗರ ತಾಲ್ಲೂಕು

ದೃಶ್ಯ ಸಮ್ಮೇಳನದ ಮೂಲಕ ಕರೆಯಿಸಿ **ಪ್ರಮಾಣೀಕರಿಸಿದ**
ದಿನಾಂಕ :28.07.2026.

**ಮುಖ್ಯ ವಿಚಾರಣೆ : ಸಸಅ ರಿಂದ**

1. ಸುಮಾರು 5 ವರ್ಷಗಳ ಹಿಂದೆ ಪೊಲೀಸರು ಠಾಣೆಯಲ್ಲಿ ಯಾವುದೋ ದಾಖಲೆಯ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ನಾನು ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನಿಪಿ 1 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ದಾಳಿ ನಡೆಸಿರುವುದಿಲ್ಲ ಮತ್ತು ಏನನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ಈಗ ಓದಿ ಹೇಳಿದ ನಿಪಿ 1 ರಂತೆ ಪೊಲೀಸರು ನನ್ನ ಸಮಕ್ಷಮ ದಾಳಿ ನಡೆಸಿ ಮದ್ಯದ ಮಾಲನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ 1 ಕ್ಕೆ ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ದಿಃ19.09.2020 ರಂದು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯವನ್ನು ನುಡಿದಿದ್ದರಿಂದ ಹೇಳಿಕೆಯನ್ನು ನಿಪಿ 9 ಎಂದು ಗುರುತಿಸಲಾಯಿತು. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.</u>

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.